ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

01-08-2008ರ ನಂತರ ನೇಮಕವಾದ ಶಿಕ್ಷಕರು ಮತ್ತು ಉಪನ್ಯಾಸಕರ ವಿಶೇಷ ಭತ್ಯೆ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ) –

105 (40) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) 01-08-2008ರ ನಂತರ ನೇಮಕಾತಿ ಹೊಂದಿದ ಸರ್ಕಾರಿ ಮತ್ತು ಅನುದಾನಿತ ಪ್ರೌಢ ಶಾಲಾ ಶಿಕ್ಷಕರು ಮತ್ತು ಉಪನ್ಯಾಸಕರ ಸಂಖ್ಯೆ ಎಷ್ಟು;

(ಆ) ಇವರಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿದೆಯೇ;

(ಇ) ಇವರಿಗೆ ವಿಶೇಷ ಭತ್ಯೆಯನ್ನು ಹೆಚ್ಚುವರಿಯಾಗಿ ನೀಡಲಾದ ಪ್ರಕರಣಗಳಲ್ಲಿ ಭತ್ಯೆಯನ್ನು ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ;

(ಈ) ಈ ಬಗ್ಗೆ ನ್ಯಾಯಾಲಯಗಳಲ್ಲಿ ಕೂಡಲೇ ವಸೂಲು ಮಾಡಲು ಸೂಚಿಸಿರುವ ಆದೇಶವನ್ನು ಹಿಂಪಡೆಯಲು ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?